(ಈ) ತಾಳಿಕೋಟೆ ಮುಖ್ಯ ರಸ್ತೆಯಲ್ಲಿ 26 ಎಕರೆ ಜಮೀನನ್ನು ಕೈಗಾರಿಕಾ ವಸಾಹತು ಸ್ಥಾಪನೆಗಾಗಿ ಹಂಚಿಕೆ ಮಾಡುವಂತೆ, ಆಯುಕ್ತರು, ಕರ್ನಾಟಕ ಗೃಹ ಮಂಡಳಿಯವರಿಗೆ, ಕೆ.ಎಸ್.ಎಸ್.ಐ.ಡಿ.ಸಿ. ಯವರು ದಿನಾಂಕ 21-06-2007 ರಲ್ಲಿ ಕೋರಿರುತ್ತಾರೆ.

866. **ಶ್ರೀ ಮುನಿಯಪ್ಪ ಎಸ್. ಎಂ. (ಚಿಕ್ಕಬಳ್ಳಾಪುರ)**:- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಗರ್ ಹುಕುಂ ಸಾಗುವಳಿ ಸಮಿತಿ ರಚನೆ ಮಾಡುವ ವಿಷಯ ಸರ್ಕಾರದ ಮುಂದೆ ಇದೆಯೇ;

(ಆ) ಹಾಗಿದ್ದಲ್ಲಿ, ಬಗರ್ ಹುಕುಂ ಸಾಗುವಳಿ ಸಮಿತಿಯನ್ನು ಯಾವಾಗ ರಚನೆ ಮಾಡಲಾಗುವುದು;

(ಇ) ಈಗಾಗಲೇ ಈ ಸಮಿತಿಗಳನ್ನು ಕೆಲವು ಕ್ಷೇತ್ರಗಳಲ್ಲಿ ಅನುಷ್ಠಾನಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಉಳಿದ ಕ್ಷೇತ್ರಗಳಲ್ಲಿ ಇನ್ನು ಇಂತಹ ಸಮಿತಿಗಳ ರಚನೆ ಆಗದಿರುವ ಬಗ್ಗೆ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಕಂದಾಯ ಸಚಿವರು):-

(ಅ) ಹೌದು

(ಆ) 123 ತಾಲ್ಲೂಕುಗಳಿಗೆ ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಗಳನ್ನು ರಚಿಸಲಾಗಿದೆ. ಉಳಿದ ತಾಲ್ಲೂಕುಗಳ ಸಮಿತಿಗಳನ್ನು ರಚಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

(ಇ) ಹೌದು, ಉಳಿದ ತಾಲ್ಲೂಕುಗಳ ಸಮಿತಿಗಳನ್ನು ರಚಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

774. **ಶ್ರೀ ರಮೇಶ್ ಕುಮಾರ್ ಕೆ. ಆರ್. (ಶ್ರೀನಿವಾಸಪುರ)**:- ಮಾನ್ಯ ಉಪಮುಖ್ಯಮಂತ್ರಿಗಳು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ಇಲಾಖೆಯ ನಿರ್ವಹಣೆಯ ವ್ಯಾಪ್ತಿಯಲ್ಲಿ ಬರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು;

(ಆ) ಈವರೆವಿಗೂ ಎಷ್ಟು ಕೆರೆಗಳನ್ನು ಹೂಳೆತ್ತುವ ಕಾರ್ಯಕ್ರಮದಲ್ಲಿ ಸೇರಿಸಲಾಗಿದೆ;

(ಇ) ಈ ಪೈಕಿ ಎಷ್ಟು ಕೆರೆಗಳ ಪೋಷಕ ಕಾಲುವೆ (ಫೀಡರ್ ಚಾನಲ್) ತೋಬು ಕಾಲುವೆ, ಕೆರೆ ಕಟ್ಟೆ ದುರಸ್ತಿ ಕೆಲಸಗಳಿಗಾಗಿ ಈವರೆಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ (ವಿವರ ನೀಡುವುದು)?